ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/238/ವಿ.ಅ.ಕಾ.ನಿ/2019-20

ದಿನಾಂಕ: 29.01.2020

## ತಿದ್ದುಪಡಿ ಆದೇಶ

**ವಿಷಯ:** ಅನ್ಯಕಾರ್ಯನಿಮಿತ್ತ ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ:**
1. ಗೌರವಾಧ್ಯಕ್ಷರು, ಕರ್ನಾಟಕ ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ನೌಕರರ ಸಂಘ, (ನೋಂ.) ರವರ ಪತ್ರ ಸಂಖ್ಯೆ:ಕಾಶಿಇ/ಆನೌ:ಸಂ:26: 2019-20
2. ಈ ಕಛೇರಿಯ ಸಮಸಂಖ್ಯೆ ಅಧಿಕೃತ ಜ್ಞಾನದ ದಿನಾಂಕ:23.01.2020.

* * * * * *

ಕರ್ನಾಟಕ ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ನೌಕರರ ಸಂಘದ ರಾಜ್ಯ ಮಟ್ಟದ ಸಮ್ಮೇಳನ ಹಾಗೂ ವಿಚಾರ ಸಂಕೀರ್ಣವನ್ನು ದಿನಾಂಕ:01.02.2020 ರಂದು ಬೆಳಗ್ಗೆ 11.00 ಗಂಟೆಗೆ ತುಮಕೂರಿನ ಸಿದ್ಧಗಂಗಾ ಮಠದ ಆವರಣದಲ್ಲಿ ಏರ್ಪಡಿಸಲಾಗಿದ್ದು, ಸದರಿ ಸಮ್ಮೇಳನ ಹಾಗೂ ವಿಚಾರ ಸಂಕಿರಣದಲ್ಲಿ ಭಾಗವಹಿಸಲು ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಬೋಧಕೇತರ ನೌಕರರುಗಳಿಗೆ ಉಲ್ಲೇಖಿತ (2)ರ ಅಧೀಕೃತ ಜ್ಞಾಪನದಲ್ಲಿ ಹೊರಡಿಸಲಾಗಿದ್ದ ಆದೇಶವನ್ನು ಭಾಗಶ: ಮಾರ್ಪಡಿಸಿ ಈ ಕೆಳಕಂಡಂತೆ ಮಂಜೂರು ಮಾಡಲಾಗಿದೆ.

ಕಾರ್ಯಕ್ರಮ ನಡೆಯುವ ಸ್ಥಳದಿಂದ 250 ಕಿ.ಮೀ. ಗಿಂತ ಹೆಚ್ಚಿನ ದೂರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿ / ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ದಿನಾಂಕ:31.01.2020 ಹಾಗೂ 01.02.2020 ಎರಡು ದಿನಗಳು ಹಾಗೂ 250 ಕಿ.ಮೀ. ಗಿಂತ ಕಡಿಮೆ ದೂರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿ / ಕಾಲೇಜುಗಳಲ್ಲಿನ ಸಿಬ್ಬಂದಿಗಳು ದಿನಾಂಕ:01.02.2020 ರಂದು ಮಾತ್ರ ಅನ್ಯಕಾರ್ಯನಿಮಿತ್ತ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕಾಲೇಜು ಶಿಕ್ಷಣ ಆಯುಕ್ತರು

**ಇವರಿಗೆ:**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ. – ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಗೌರವಾಧ್ಯಕ್ಷರು, ಕರ್ನಾಟಕ ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ನೌಕರರ ಸಂಘ (ನೋಂ.) ಕಾಲೇಜು ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಯ ಆವರಣ, ಅರಮನೆ ರಸ್ತೆ, ಬೆಂಗಳೂರು-560 001.
4. ಕಛೇರಿ ಪ್ರತಿ.